ಶಿವಮೊಗ್ಗ ನಗರದಲ್ಲಿ ಆಶ್ರಯ ಯೋಜನೆಯಡಿ ನಿವೇಶನ ಹಂಚಿಕೆ

134 (379) ಕೆ.ಜಿ. ಕುಮಾರಸ್ವಾಮಿ (ಶಿವಮೊಗ್ಗ ಗ್ರಾಮಾಂತರ) ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ನಗರದಲ್ಲಿ ಆಶ್ರಯ ಸಮಿತಿ ಮೂಲಕ ಕಳೆದ ಮೂರು ವರ್ಷಗಳಿಂದ ಹಂಚಿಕೆಯಾದ ನಿವೇಶನಗಳೆಷ್ಟು; (ಪ್ರತಿ ಫಲಾನುಭವಿಯ ಹೆಸರು, ತಂದೆ ಹೆಸರು, ವಿಳಾಸ, ವರಮಾನ ಇವುಗಳ ವಿವರ ನೀಡುವುದು)

ಆ) ಈ ಪೈಕಿ ಈಗಾಗಲೇ ನಿವೇಶನ ಹೊಂದಿರುವವರು ಆಯ್ಕೆಯಾಗಿರುವುದನ್ನು ಪತ್ತೆ ಹಚ್ಚಲಾಗಿದೆಯೇ;

ಇ) ಈ ನಿವೇಶನ ಹಂಚಿಕೆಗಾಗಿ ಖರ್ಚು ಮಾಡಲಾದ ಅನುದಾನವೆಷ್ಟು?

ಶ್ರೀ ವಿ. ಸೋಮಣ್ಣ (ವಸತಿ ಸಚಿವರು):

ಅ) ಶಿವಮೊಗ್ಗ ನಗರದಲ್ಲಿ ಆಶ್ರಯ ಸಮಿತಿ ಮೂಲಕ ಕಳೆದ ಮೂರು ವರ್ಷಗಳಿಂದ ಯಾವುದೇ ನಿವೇಶನಗಳು ಹಂಚಿಕೆಯಾಗಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಪ್ರವಾಸಿ ತಾಣಗಳ ಅಭಿವೃದ್ಧಿ

135 (380) ಕುಮಾರಸ್ವಾಮಿ ಕೆ.ಜಿ. (ಶಿವಮೊಗ್ಗ ಗ್ರಾಮಾಂತರ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಗ್ರಾಮಾಂತರ ಕ್ಷೇತ್ರದ ಗೌಡನಕೆರೆ ದೋಣಿ ವಿಹಾರ ಕೇಂದ್ರ ಯಡೇಹಳ್ಳಿ, ಚಂದನಕೆರೆ, ಕೂಡ್ಲಿ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕ್ರಿಯಾ ಯೋಜನೆ ಹಾಕಿಕೊಳ್ಳಲಾಗಿದೆಯೇ; ಇದರ ರೂಪುರೇಷೆಗಳೇನು;

ಆ) 2010–11ನೇ ಸಾಲಿನಲ್ಲಿ ಇನ್ನೂ ಹೆಚ್ಚುವರಿ ಸ್ಥಳಗಳನ್ನು ಗುರುತಿಸಲಾಗಿದೆಯೇ; (ವಿವರ ನೀಡುವುದು)

ಇ) ಕೂಡ್ಲಿ ಕ್ಷೇತ್ರವನ್ನು ಪ್ರವಾಸಿ ತಾಣವನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ವಿ. ಸೋಮಣ್ಣ (ವಸತಿ ಸಚಿವರು):

ಅ) ಈ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಆ) ಗುರುತಿಸಿರುವುದಿಲ್ಲ.